# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 476
2. ಸದಸ್ಯರ ಹೆಸರು : ಶ್ರೀ ಐವನ್.ಡಿ' ಸೋಜಾ,
3. ಉತ್ತರಿಸಬೇಕಾದ ದಿನಾಂಕ :14.08.2025.
4. ಉತ್ತರಿಸುವ ಸಚಿವರು : ಮಾನ್ಯ ಸಣ್ಣ ನೀರಾವರಿ, ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ | ಸಣ್ಣ ನೀರಾವರಿಯ ಇಲಾಖೆಯಿಂದ ನಿರ್ಮಿಸಲ್ಪಟ್ಟ ಕಿಂಡಿ ಅಣೆಕಟ್ಟುಗಳ ಹಲಗೆಯನ್ನು ಸರಿಯಾದ ಸಮಯದಲ್ಲಿ ಅಳವಡಿಸದೆ ರೈತರಿಗೆ ಇದರಿಂದ ಪ್ರಯೋಜನ ಆಗುತ್ತಿಲ್ಲ ಎಂಬ ದೂರುಗಳಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;(ವಿವರ ನೀಡುವುದು) | ಸಣ್ಣ ನೀರಾವರಿ ಇಲಾಖೆಗೆ ಪ್ರತಿ ವರ್ಷ ಸಣ್ಣ ನೀರಾವರಿ ಯೋಜನೆಗಳ ನಿರ್ವಹಣೆಗಾಗಿ ಒದಗಿಸಲಾಗುವ ಅನುದಾನದಲ್ಲಿ ಕಿಂಡಿ ಅಣೆಕಟ್ಟುಗಳ ನಿರ್ವಹಣೆ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಸದರಿ ನಿರ್ವಹಣೆ ಕಾಮಗಾರಿಗಳಲ್ಲಿ ಹಲಗೆ ಹಾಕುವ/ಹಲಗೆ ತೆಗೆಯುವ ಕೆಲಸಗಳನ್ನು ನಿರ್ವಹಿಸಲಾಗುತ್ತಿದೆ.<br><br>ಸದರಿ ಕಿಂಡಿ ಅಣೆಕಟ್ಟುಗಳ ನಿರ್ವಹಣೆಯನ್ನು ಪ್ರತೀ ವರ್ಷ ಸರ್ಕಾರದಿಂದ ಬಿಡುಗಡೆಯಾಗುವ ಅನುದಾನದ ಲಭ್ಯತೆಗನುಗುಣವಾಗಿ ಸಮರ್ಪಕವಾಗಿ ಕೈಗೊಳ್ಳಲಾಗುತ್ತಿದ್ದು. ರೈತರು ಪ್ರಯೋಜನ ಪಡೆಯುತ್ತಿರುತ್ತಾರೆ. |
| ಆ | ಕಿಂಡಿ ಅಣೆಕಟ್ಟುಗಳ ನಿರ್ವಹಣೆಗಾಗಿ ಸರ್ಕಾರ ಮಾಡುತ್ತಿರುವ ವೆಚ್ಚ ಎಷ್ಟು; (ವಿವರ ನೀಡುವುದು) | ಕಳೆದ 3 ವರ್ಷಗಳಲ್ಲಿ ಕಿಂಡಿ ಅಣೆಕಟ್ಟುಗಳ ಹಲಗೆ ಹಾಕುವ/ಹಲಗೆ ತೆಗೆಯುವ ಕೆಲಸ ಸೇರಿದಂತೆ ನಿರ್ವಹಣೆಗಾಗಿ ಮಾಡಿರುವ ವೆಚ್ಚದ ವಿವರಗಳನ್ನು ಅನುಬಂಧದಲ್ಲಿ ಸಲ್ಲಿಸಿದೆ. |
| ಇ | ಕಿಂಡಿ ಅಣೆಕಟ್ಟುಗಳಿಗೆ ಹಾಕಿದ ಅಸಮರ್ಪಕ ಹಲಗೆಯಿಂದ ಅದನ್ನು ತೆಗೆಯಲು ಹೋಗಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮೃತಪಟ್ಟ ವ್ಯಕ್ತಿಗಳಿಗೆ ಸರ್ಕಾರ ಪರಿಹಾರ ನೀಡಿದೆಯೇ; ಈ ಬಗ್ಗೆ ರೈತರಿಗೆ ತಿಳುವಳಿಕೆ ನೀಡಲಾಗಿದೆಯೇ?(ವಿವರ ನೀಡುವುದು) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈ ಇಲಾಖೆಯಿಂದ ನಿರ್ವಹಣೆಯಲ್ಲಿರುವ ಕಿಂಡಿ ಅಣೆಕಟ್ಟುಗಳಿಗೆ ಅಳವಡಿಸಿದ ಹಲಗೆಯನ್ನು ತೆಗೆಯಲು ಹೋಗಿ ಮೃತಪಟ್ಟ ಪ್ರಕರಣಗಳು ಯಾವುದೂ ಇರುವುದಿಲ್ಲ. |

**MID 58 LCQ 2025**

**(ಎನ್.ಎಸ್. ಬೋಸರಾಜು)**
ಸಣ್ಣ ನೀರಾವರಿ, ಹಾಗೂ ವಿಜ್ಞಾನ
ಮತ್ತು ತಂತ್ರಜ್ಞಾನ ಸಚಿವರು.

ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) ಅವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:441 (476) ಕ್ಕೆ ಅನುಬಂಧ

ಕಿಂಡಿ ಅಣೆಕಟ್ಟುಗಳ ನಿರ್ವಹಣೆಗಾಗಿ ಮಾಡುತ್ತಿರುವ ವೆಚ್ಚದ ವಿವರ

ರೂ.ಲಕ್ಷಗಳಲ್ಲಿ

| ಕ್ರ.ಸಂ. | ಜಿಲ್ಲೆ | ಕಿಂಡಿ ಅಣೆಕಟ್ಟುಗಳ ಸಂಖ್ಯೆ | ಕಿಂಡಿ ಅಣೆಕಟ್ಟುಗಳ ನಿರ್ವಹಣೆಗಾಗಿ ಮಾಡಿದ ವೆಚ್ಚ | | | ಷರಾ |
|---|---|---|---|---|---|---|
| | | | 2022–23 | 2023–24 | 2024–25 | |
| 1 | 2 | 3 | 4 | 5 | 6 | 7 |
| 1 | ದಕ್ಷಿಣ ಕನ್ನಡ | 473 | 321.26 | 152.45 | 441.46 | |
| 2 | ಉಡುಪಿ | 688 | 381.54 | 352.22 | 317.01 | |
| 3 | ಕೊಡಗು | 20 | 134.5 | 114.55 | 213.29 | |
| 4 | ಉತ್ತರ ಕನ್ನಡ | 153 | 11.70 | 4.00 | 5.50 | |
| | ಒಟ್ಟು | **1334** | **849.00** | **623.22** | **977.26** | |